# ಸಶಕ್ತ ಭಾರತ ನಿರ್ಮಾಣಕ್ಕಾಗಿ ಮತ ಚಲಾಯಿಸಿ:ಜಿಲ್ಲಾಧಿಕಾರಿ ಟಿ.ಭೂಬಾಲನ್



ವಿಜಯಪುರ ಏ. ; ಸದೃಡ ಭಾರತ ನಿರ್ಮಾಣಕ್ಕಾಗಿ, ಸಶಕ್ತ ಭಾರತವನ್ನು ಮುನ್ನೆಡಸಲು ಯೋಗ್ಯ ವ್ಯಕ್ತಿಯನ್ನು ಆಯ್ಕೆ ಮಾಡಲು ಮತದಾನ ಅತ್ಯಗತ್ಯವಾಗಿದೆ. ಹಾಗಾಗಿ ಎಲ್ಲರೂ ಕಡ್ಡಾಯವಾಗಿ ಮತ ಚಲಾಯಿಸಬೇಕು ಎಂದು ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಟಿ.ಭೂಬಾಲನ್ ಹೇಳಿದರು.

ಅವರು ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಲೋಕಸಭೆ ಚುನಾವಣೆ–2024ರ ನಿಮಿತ್ತ ಮತದಾನ ಜಾಗೃತಿ ಮೂಡಿಸುವ ಸ್ಥಬ್ಧಚಿತ್ರ ವಾಹನಕ್ಕೆ ಶುಕ್ರವಾರ ಹಸಿರು ನಿಶಾನೆ ತೋರುವುದರ ಮೂಲಕ ಮಾತನಾಡಿದರು. ಮತ ಚಲಾಯಿಸುವುದರ ಮೂಲಕ ದೇಶದ ಸಮಗ್ರತೆ ಹಾಗೂ ಪ್ರಗತಿಗೆ ಮುನ್ನುಡಿ ಬರೆಯಬೇಕು. ನಾವು ಹಾಕುವ ಮತ ಕೇವಲ ಒಬ್ಬ ವ್ಯಕ್ತಿಗೆ ಸೀಮಿತವಾಗಿರುವುದಿಲ್ಲ ಅದು ದೇಶದ ಭವಿಶ್ಯವನ್ನು ನಿರ್ಮಾಣ ಮಾಡುವ, ಅಭಿವೃದ್ಧಿಗೆ ಪೂರಕವಾಗಿರುವ ಮೆಟ್ಟಿಲು ಆಗಿರುತ್ತದೆ ಎಂದು ಹೇಳಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಿಶಿ ಆನಂದ ಮಾತನಾಡಿ, ಮತದಾನದಿಂದ ದೇಶದ ಅಭಿವೃದ್ಧಿ ಸಾಧ್ಯ. ನನ್ನ ಒಂದು ಒಂದು ಮತದಾನವೂ ದೇಶದ ಭವಿಳ್ಯಕ್ಕೆ ಸಹಕಾರಿಯಾಗುತ್ತದೆ ಎಂಬುದನ್ನು ಅರಿತುಕೊಂಡು ಮತ ಚಲಾಯಿಸಬೇಕು. ಬಹುದೊಡ್ಡ ಪ್ರಜಾಪ್ರಭುತ್ವ ದೇಶ ಭಾರತಕ್ಕೆ ಮತದಾನ ಎಂಬುದು ಅತ್ಯಂತ ಪ್ರಾಮುಖ್ಯತೆ ಹೊದಿಂರುವ ಕರ್ತವ್ಯವಾಗಿದೆ ಎಂದರು.

ಈಗಾಗಲೇ ಸ್ವೀಪ್ ವತಿಯಿಂದ ಮತದಾನ ಪ್ರಮಾಣ ಹೆಚ್ಚಿಸಲು ಜಿಲ್ಲೆಯಲ್ಲಿ ಹಲವಾರು ರಚನಾತ್ಮಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಎಲ್ಲರೂ ತಪ್ಪದೆ ಮತ ಚಲಾಯಿಸಿ ಸುಭದ್ರ ದೇಶ ನಿರ್ಮಾಣ ಮಾಡಲು ಸಹಕರಿಸಬೇಕು ಎಂದರು.

ಈ ವೇಳೆಯಲ್ಲಿ ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ, ಮಹಾನಗರ ಪಾಲಿಕೆ ಆಯುಕ್ತ ಅರ್ಳದ, ಜಿಲ್ಲಾ ಆರೋಗ್ಯ ಹಾಗೂ ಕುಟುಂಬ ಕಲ್ಯಾಣ ಅಧಿಕಾರಿ ಡಾ. ಬಸವರಾಜ ಹುಬ್ಬಳ್ಳಿ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಪುಂಡಲಿಕ ಮಾನವರ, ಸೇರಿದಂತೆ ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ಅಧಿಕಾರಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಭದ್ರತಾ ಸಿಬ್ಬಂದಿ ನೇಮಕಾತಿಗಾಗಿ ಅರ್ಜಿ ಅಹ್ವಾನ

ವಿಜಯಪುರ, ಏ.: ವಿಜಯಪುರ ಜಿಲ್ಲಾ ಆಸ್ಪತ್ರೆಯಲ್ಲಿ ತಾತ್ಕಾಲಿಕ ಆಧಾರದ ಮೇಲೆ 6 ಭದ್ರತಾ ಸಿಬ್ಬಂದಿ ನೇಮಕಾತಿ ಹುದ್ದೆಗಳಿಗಾಗಿ ಮಾಜಿ ಸೈನಿಕರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತರು ಐದು ದಿನದ ಒಳಗಾಗಿ ತಮ್ಮ ವಿವರವನ್ನು ಉಪನಿರ್ದೇಶಕರ ಕಾರ್ಯಾಲಯ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ವಿಜಯಪುರ ಇವರಿಗೆ ಅರ್ಜಿಯನ್ನು ಸಲ್ಲಿಸಬಹುದು ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನೂತನವಾಗಿ ಅಧ್ಯಕ್ಷರಾಗಿ ಆಯ್ಕೆಗೊಂಡ ಖಜಾಪೂರ ಅವರಿಗೆ ಸನ್ಮಾನ



ವಿಜಯಪುರ : ಆನಂದಗೌಡರ ಗೆಳೆಯರ ಬಳಗ ಮತ್ತು ವಿಜಯಪುರಜಿಲ್ಲಾ ಸರಕಾರಿ ನೌಕರರ ಸಹಕಾರಿ ಬ್ಯಾಂಕಿನ ನಿರ್ದೇಶಕರ ಮಂಡಳಿ ವತಿಯಿಂದಜಿಲ್ಲಾ ಸರಕಾರಿ ವಾಹನ ಚಾಲಕರ ಸಂಘದಅಧ್ಯಕ್ಷರಾಗಿಎಸ್.ಎಲ್. ಖಜಾಪೂರ ಅವಿರೋಧವಾಗಿ ಆಯ್ಕೆಗೊಂಡ ಹಿನ್ನೆಲೆ ಹೃದಯಸ್ಪರ್ಶಿ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಬ್ಯಾಂಕಿನ ಮಾಜಿಅಧ್ಯಕ್ಷರು ಹಾಲಿ ನಿರ್ದೇಶಕರುಗಳಾದ ಅರ್ಜುನ.ಜಿ.ಲಮಾಣಿ, ಹಣಮಂತ.ಬಿ.ಕೊಣದಿ, ಆನಂದಗೌಡ.ಎನ್.ಬಿರಾದಾರ, ಅಶೋಕ.ವಿ. ಚನಬಸಗೋಳ,ಜಯಶ್ರೀ.ಎಸ್.ಬೆಣ್ಣೆ,ಶ್ರೀಮತಿ ನೀಲಾ.ಎಲ್.ಇಂಗಳೆ ಮುಂತಾದವರುಇದ್ದರು.

# ಕಣ್ಣಿತ್ತ ಪೂಜ್ಯರು 13 ನೆಯರಾಜ್ಯ ಮಟ್ಟದ ಕವಿಗೋಷ್ಠಿ


ದಾವಣಗೆರೆ : ಡಾ. ಪಂಡಿತ ಪುಟ್ಟರಾಜ ಸೇವಾ ಸಮಿತಿ (ರಿ) ಗದಗ ಅರ್ಪಿಸುವ, ಹಾನಗಲ್ ಗುರುಕುಮಾರ ಮಹಾಸ್ವಾಮಿಗಳ, ಗಾನಯೋಗಿ ಪಂ. ಪಂಚಾಕ್ಷರಿ ಗವಾಯಿಗಳವರ, ಪದ್ಮಭೂಳಣಡಾ. ಪಂ. ಪುಟ್ಟರಾಜ ಶಿವಯೋಗಿ ಕವಿ ಗವಾಯಿಗಳವರ ಕುರಿತಾಗಿ ರಚಿಸಿದ ಕಲೆಗೆ ಕಣ್ಣಿತ್ತ ಪೂಜ್ಯರು 13 ನೆಯರಾಜ್ಯ ಮಟ್ಟದ ಕವಿಗೋಷ್ಠಿಯು, ದಿನಾಂಕ 12 ಮೇ 2024 ರವಿವಾರ ಬೆಳಗ್ಗೆ 11 ಗಂಟೆಗೆ, ದಾವಣಗೆರೆಯ ಬಾಡಕ್ರಾಸ್‌ನಲ್ಲಿ ಇರುವ ಶ್ರೀ ವೀರೇಶ್ವರ ಪುಣ್ಯಾಶ್ರಮದಲ್ಲಿ,ಏರ್ಪಡಿಸಲಾಗಿದೆ.

ಪೂಜ್ಯತ್ರಯರಕುರಿತಾಗಿ ರಚಿಸಿದ ಸ್ವರಚಿತ ಕವನ ವಾಚನ ಮಾಡಲು ಆಸಕ್ತ ಕವಿಗಳು ತಮ್ಮ ಹೆಸರು ನೋಂದಾಯಿಸಿಕೊಳ್ಳಲು ಕೋರಲಾಗಿದೆ.

ಪೂಜ್ಯತ್ರಯರಲ್ಲಿಯಾರಾದರೂಒಬ್ಬರನ್ನುಕುರಿತು ರಚಿಸಿದ ಸ್ವರಚಿತ ಕವನ ಮಾತ್ರ ವಾಚಿಸಲು ಅವಕಾಶ ವಿರುತ್ತದೆ. ತಾವು ವಾಚಿಸಲಿರುವ ಒಂದು ಅಥವಾ ಮೂರು ಕವನಗಳನ್ನು ಕಳಿಸಿಕೊಟ್ಟು ಹೆಸರು ನೋಂದಾಯಿಸಿ ಕೊಳ್ಳಬಹುದಾಗಿದೆ.ಆಯ್ಕೆಯಾದ ಕವನಗಳ ಕವಿಗಳನ್ನು ಮಾತ್ರಅಹ್ವಾನಿಸಲಾಗುವುದು.

ಭಾಗವಹಿಸಿದ ಕವಿಗಳಿಗೆ ಅಭಿನಂದನಾ ಪತ್ರ, ಪುಸ್ತಕ ಕಾಣಿಕೆಯೊಂದಿಗೆ ಸನ್ಮಾನಿಸಿ ಗೌರವಿಸಲಾಗುವುದು. ದೂರದ ಊರುಗಳಿಂದ ಬರುವ ಕವಿಗಳಿಗೆ ಊಟ ಮತ್ತು ಸಾಮೂಹಿಕ ವಸತಿಒದಗಿಸಲಾಗುವುದು.

ಭಾಗವಹಿಸಲು ಆಸಕ್ತರು ತಮ್ಮ ಪೂರ್ಣಹೆಸರು,ಅಂಚೆ ವಿಳಾಸ ತಿಳಿಸಿ, ಗುಣಮಟ್ಟದಒಂದುಭಾವಚಿತ್ರದೊಂದಿಗೆಶ್ರೀಮತಿ ವಾಣಿ ಬಸವರಾಜಕವಿಯತ್ರಿ, ಲೇಖಕಿ,ಆಂಗ್ಲ ಭಾಷಾ ಉಪನ್ಯಾಸಕಿ ದಾವಣಗೆರೆ



ಇವರ 9902052121/ 9886717732 ವಾಟ್ಸಾಪ್ ನಂಬರಗೆ ಕಳಿಸಿಕೊಡಬಹುದು ಕರೆಗಳನ್ನು ಸ್ವೀಕರಿಸುವುದಿಲ್ಲ. ಹೆಸರು ನೋಂದಾಯಿಸಿಕೊಳ್ಳಲು ಕೊನೆಯ ದಿನಾಂಕ 30 ಏಪ್ರಿಲ್ 2023. ಆಗಿದೆಎಂದುಡಾ. ಪಂ. ಪುಟ್ಟರಾಜ ಸೇವಾ ಸಮಿತಿರಾಜ್ಯ ಸಂಘಟನಾ ಕಾರ್ಯದರ್ಶಿಶಿವಬಸಯ್ಯಪಂ. ಚರಂತಿಮಠ ದಾವಣಗೆರೆ ಇವರು ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

# ಸರಕಾರಿ ಪದವಿಪೂರ್ವ ಕಾಲೇಜು ಕೂಡಗಿ ವಿದ್ಯಾರ್ಥಿಗಳ ಸಾಧನೆ







ಮೊನ್ನೆ ನಡೆದ ದ್ವಿತೀಯ ಪಿಯುಸಿಪರೀಕ್ಷೆಯಲ್ಲಿ ಸರಕಾರಿ ಪದವಿಪೂರ್ವ ವಿದ್ಯಾರ್ಥಿಗಳು ಗಮನಾರ್ಹ ಸಾಧನೆಯನ್ನು ಮಾಡಿದ್ದು ಗ್ರಾಮ ಪಂಚಾಯತಿ, ಎಸ್. ಡಿ. ಎಮ್. ಸಿ, ಗ್ರಾಮದ ಗುರು, ಹಿರಿಯರು ಹಾಗೂ ಕಾಲೇಜಿನ ಸಿಬ್ಬಂಧಿವರ್ಗ ಅಭಿನಂದನೆಗಳನ್ನು ತಿಳಿಸಿದ್ದಾರೆ.

ರುಕ್ಮಿಣಿ ತಳೇವಾಡಸಮಾಜಶಾಸ್ತ್ರ ಹಾಗೂ ಅರ್ಥಶಾಸ್ತ್ರ ವಿಳಯದಲ್ಲಿ ನೂರಕ್ಕೆ ನೂರು ಅಂಕಗಳನ್ನು ಗಳಿಸುವುದರ ಮೂಲಕ ಶೇಕಡಾ 96% ಕಾಲೇಜಿಗೆ ಪ್ರಥಮ ಸ್ಥಾನ ಸೌಮ್ಯ ಬಡಿಗೇರ ಸಮಾಜಶಾಸ್ತ್ರದಲ್ಲಿ ನೂರಕ್ಕೆ 96 ಅಂಕಗಳ ಮೂಲಕ ಶೇಕಡಾ 94% ಗಳಿಸಿ ದ್ವಿತೀಯ ಸ್ಥಾನ ಹಾಗೂ ಉಮೇಶ ನಾಯಕ ಶೇಕಡಾ 92% ಅಂಕಗಳೊಂದಿಗೆ ಕಾಲೇಜಿಗೆ ತೃತೀಯ ಸ್ಥಾನವನ್ನು ಪಡೆದಿದ್ದಾರೆ.

ಒಟ್ಟು 65 ವಿದ್ಯಾರ್ಥಿಗಳು ಪರೀಕ್ಷೆಗೆ ಕುಳಿತುಕೊಂಡಿದ್ದು ನಾಲ್ಕು ಜನ ವಿದ್ಯಾರ್ಥಿಗಳು ಪರೀಕ್ಷೆಗೆ ಕೂಡದೇ ಗೈರು ಹಾಜರಾಗಿದ್ದಾರೆ. ಕೇವಲ ಒಬ್ಬ ವಿದ್ಯಾರ್ಥಿ ಮಾತ್ರ ಆಂಗ್ಲ ವಿಳಯದಲ್ಲಿ ಅನುತ್ತೀರ್ಣಗೊಂಗಡಿದ್ದು ಕಾಲೇಜಿನ ಫಲಿತಾಂಶ ಶೇಕಡಾ 97'% ರಳ್ಟಾಗಿದ್ದು. ಪ್ರಾಚಾರ್ಯ ಕೆ. ಜಿ. ಲಮಾಣಿಹಾಗೂ ಉಪನ್ಯಾಸಕ ವರ್ಗ ವಿದ್ಯಾರ್ಥಿಗಳಿಗೆ ಶುಭ ಹಾರೈಸಿದ್ದಾರೆ.

# ಈಶಾನ್ಯ ರಾಜ್ಯಗಳಲ್ಲಿ ಪ್ರಿಯಾಂಕ ಗಾಂದಿ ಪ್ರಚಾರ

ತ್ರಿಪುರಾ,ಏ.–ಲೋಕಸಭೆ ಚುನಾವಣೆ ಹಿನ್ನೆಲೆಯಲ್ಲಿ ಪ್ರಧಾನಿ ಮೋದಿ ಅವರು ತ್ರಿಪುರಾದಲ್ಲಿ ಚುನಾವಣಾ ಸಭೆಯನ್ನುದ್ದೇಶಿಸಿ ಮಾತನಾಡುವ ಒಂದು ದಿನ ಮುಂಚಿತವಾಗಿ ಏಪ್ರಿಲ್ 16 ರಂದು ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ಬೃಹತ್ ರೋಡ್ ಶೋ ನಡೆಸುವ ಮೂಲಕ ಜನಮನ ಗೆಲ್ಲಲು ಕಸರತ್ತು ನಡೆಸಲಿದ್ದಾರೆ

ಏಪ್ರಿಲ್ 16 ರಂದು ತ್ರಿಪುರಾದ ಅಗರ್ತಲಾದ ಸ್ವಾಮಿ ವಿವೇಕಾನಂದ ಮೈದಾನದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಚುನಾವಣಾ ರ್‍ಯಾಲಿ ನಡೆಯಲಿದ್ದು ಅದಕ್ಕೂ ಮುನ್ನ ಪ್ರಿಯಾಂಕಾ ಗಾಂಧಿ ಅವರು ಕಾಂಗ್ರೆಸ್ ಅಭ್ಯರ್ಥಿಗಳ ಪರ ಚುನಾವಣಾ ಪ್ರಚಾರ ಸಭೆಯಲ್ಲಿ ಭಾಗಿಯಾಗಲಿದ್ದು ಈಶಾನ್ಯ ರಾಜ್ಯಗಳಲ್ಲಿ ಮಿಂಚಿನ ಸಂಚಾರಕ್ಕೆ ಸಜ್ಜಾಗಿದ್ದಾರೆ

ಹಿರಿಯ ಕಾಂಗ್ರೆಸ್ ನಾಯಕ ಸಿಪಿಐಎಂ ಬೆಂಬಲಿತ ಇಂಡಿಯಾ ಬ್ಲಾಕ್ ಅಭ್ಯರ್ಥಿ ಆಶಿಶ್ ಕುಮಾರ್ ಸಹಾ ಅವರನ್ನು ಬೆಂಬಲಿಸಲು ನಗರದ ಬಹುತೇಕ ಕಡೆ ಬೃಹತ್ ರೋಡ್‌ಶೋ ನಡೆಸಲಿದ್ದಾರೆ ಸಹಾ ಅವರು ಕಾಂಗ್ರೆಸ್ ಪಕ್ಷದ ತ್ರಿಪುರಾ ರಾಜ್ಯ ಘಟಕದ ಅಧ್ಯಕ್ಷರೂ ಆಗಿದ್ದಾರೆ.

ಪ್ರಿಯಾಂಕಗಾಂಧಿ ಅವರ ಚುನಾವಣಾ ಪ್ರಚಾರದ ಬಗ್ಗೆ ಮಾಹಿತಿ ನೀಡಿದ ಕಾಂಗ್ರೆಸ್ ಶಾಸಕ ಸುದೀಪ್ ರಾಯ್ ಬರ್ಮನ್, "ಅವರು ಮಧ್ಯಾಹ್ನ 2.50 ಕ್ಕೆ ಅಗರ್ತಲಾದ ಎಂಬಿಬಿ ವಿಮಾನ ನಿಲ್ದಾಣದಲ್ಲಿ ಇಲ್ಲಿಗೆ ಬಂದಿಳಿಯಲಿದ್ದಾರೆ. ಅವರು ರೋಡ್ ಶೋ ನಡೆಸಲಿದ್ದಾರೆ ಎಂದು ತಿಳಿಸಿದ್ದಾರೆ

ಕರ್ನಲ್ ಚೌಮುಹಾನಿ, ಪ್ಯಾರಡೈಸ್ ಚೌಮುಹಾನಿ, ಇತರ ಪ್ರಮುಖ ಸ್ಥಳಗಳಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಅವರು ಮಾತನಾಡಲಿದ್ದಾರೆ. ಕಾಂಗ್ರೆಸ್ ಅಭ್ಯರ್ಥಿ ಪರ ನಡೆಯಲಿರುವ ಚುನಾವಣಾ ಪ್ರಚಾರ ಸಭೆಯಲ್ಲಿ ಕಾಂಗ್ರೆಸ್ ಪಕ್ಷದ ನಾಯಕ ಜೊತೆಗೆ ಸಿಪಿಐಎಂ ಕಾರ್ಯಕರ್ತರು ಭಾಗಿಯಾಗಲಿದ್ದಾರೆ

ತ್ರಿಪುರಾದಲ್ಲಿ ಲೋಕಸಭೆಗೆ ಎರಡು ಹಂತಗಳಲ್ಲಿ ಮತದಾನ ನಡೆಯಲಿದೆ. ಪಶ್ಚಿಮ ತ್ರಿಪುರಾ ಕ್ಷೇತ್ರಕ್ಕೆ ಏಪ್ರಿಲ್ 19 ರಂದು ಮತದಾನ ನಡೆಯಲಿದ್ದು, ಪೂರ್ವ ತ್ರಿಪುರದಲ್ಲಿ ಏಪ್ರಿಲ್ 26 ರಂದು ಮತದಾನ ನಡೆಯಲಿದೆ. ಜೂನ್ 4 ರಂದು ಮತ ಎಣಿಕೆ ನಡೆಯಲಿದೆ.

# ವೃದ್ಧರಿಗೆ ಮನೆಯಿಂದ ಮತದಾನಕ್ಕೆ ಅವಕಾಶ

ಬೆಂಗಳೂರು, ಏ. – ದೇಶದಲ್ಲಿ ನಡೆಯುತ್ತಿರುವ ಲೋಕಸಭಾ ಚುನಾವಣೆಗೆ ರಾಜ್ಯದಲ್ಲಿ ಏ. 26 ರಂದು ಮೊದಲ ಹಂತದ ಮತದಾನ ನಡೆಯಲಿದ್ದು, ಈ ಅವಧಿಯ ಚುನಾವಣೆಯಲ್ಲಿ ಮತಗಟ್ಟೆಗೆ ಬಂದು ಮತದಾನ ಮಾಡಲು ಆಗದಂತಹ 80 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು, ವಿಕಲ ಚೇತನರು ಮನೆಯಿಂದಲೇ ಮತದಾನ ಮಾಡುವ ಕಾರ್ಯ ಇಂದಿನಿಂದ ಆರಂಭವಾಗಿದ್ದು, ಬೆಳಿಗ್ಗೆ ನಗರದ ಲೇಬರ್ ಕಾಲೋನಿಯಲ್ಲಿ ಹಿರಿಯ ಮತದಾರರು ಮತದಾನ ಮಾಡಿದರು.

ನಗರದ ಲೇಬರ್ ಕಾಲೋನಿಯ ನಿವಾಸಿಗಳು ಹಾಗೂ ಹಿರಿಯ ನಾಗರಿಕರರಾದ ಶಾಂತಕುಮಾರಿ ಮತ್ತು ವೆಳ್ಳಿಯಮ್ಮ ಅವರು ತಮ್ಮ ಮನೆಯಲ್ಲೇ ಮತದಾನ ಮಾಡುವ ಮೂಲಕ ಲೋಕಸಭಾ ಚುನಾವಣೆಯ ಅಭ್ಯರ್ಥಿಗಳ ಹಣೆ ಬರಹಕ್ಕೆ ಮುದ್ರೆ ಒತ್ತಿದರು.

ಚುನಾವಣಾಧಿಕಾರಿಗಳು ಬೆಳಿಗ್ಗೆ 7 ಗಂಟೆಗೆ ಹಿರಿಯ ನಾಗರಿಕರು ಮತ್ತು ವಿಕಲಚೇತನ ಮತದಾರರ ಮನೆಗಳಿಗೆ ಭೇಟಿ ನೀಡಿ ಮತದಾನ ಮಾಡಿಸುವ ಕಾರ್ಯದಲ್ಲಿ ನಿರತರಾಗಿದ್ದಾರೆ.

ಮನೆಯಿಂದ ಮತದಾನ ಮಾಡಿದ ಶಾಂತಕುಮಾರಿ ಮತ್ತು ವೆಳ್ಳಿಯಮ್ಮ ಅವರು ಸಂತಸ ವ್ಯಕ್ತಪಡಿಸಿದ್ದು, ನಮಗೆ ಮತಗಟ್ಟೆಗೆ ಬಂದು ಮತದಾನ ಮಾಡಲು ಸಾಧ್ಯವಾಗುತ್ತಿರಲಿಲ್ಲ. ಚುನಾವಣಾ ಆಯೋಗ ಈ ರೀತಿಯ ವ್ಯವಸ್ಥೆ ಮಾಡಿರುವುದು ನಮಗೆ ತುಂಬಾ ಖುಷಿ ತಂದಿದೆ. ಇಂದು ಅಧಿಕಾರಿಗಳು ನಮ್ಮ ಮನೆಗೆ ಬಂದು ನಾವು ಮತದಾನ ಮಾಡಲು ಅನುವು ಮಾಡಿಕೊಟ್ಟಿದ್ದಾರೆ. ಮನೆಯಿಂದಲೇ ಮತದಾನ ಮಾಡಿರುವುದು ನಮಗೆ ತುಂಬಾ ಸಂತಸ ತಂದಿದೆ ಎಂದು ಪ್ರತಿಕ್ರಿಯಿಸಿದರು.

ಮಹಾನಗರ ಪಾಲಿಕೆ ಆಯುಕ್ತೆ ಹಾಗೂ ತುಮಕೂರು ನಗರ ವಿಧಾನಸಭಾ ಕ್ಷೇತ್ರದ ಚುನಾವಣಾಧಿಕಾರಿ ಬಿ.ವಿ. ಅಶ್ವಿಜಾ ಅವರು ಹಿರಿಯ ನಾಗರಿಕರು ಮತ್ತು ವಿಕಲಚೇತನರು ಮನೆಯಿಂದಲೇ ಮತದಾನ ಮಾಡುವ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲಿಸಿದ ನಂತರ ಮಾತನಾಡಿ, ಇಂದಿನಿಂದ ಹೋಮ್ ವೋಟಿಂಗ್ ಆರಂಭವಾಗಿದ್ದು, ಏ. 18 ರವರೆಗೆ ನಡೆಯಲಿದೆ. ಹಿರಿಯ ಮತದಾರರು ಹಾಗೂ ಶೇ. 40 ರಷ್ಟು ಅಂಗವೈಕಲ್ಯ ಹೊಂದಿರುವವರಿಗೆ ಮನೆಯಿಂದಲೇ ಮತದಾನ ಮಾಡಲು ಫಾರಂ 12 ರ ಮೂಲಕ ಅವಕಾಶ ಮಾಡಿಕೊಟ್ಟಿದ್ದೆವು. ಅದರಲ್ಲಿ 43 ವಿಶೇಷ ಚೇತನ ಮತದಾರರು ಹಾಗೂ 85 ವರ್ಷ ಮೇಲ್ಪಟ್ಟ 337 ಮತದಾರರು ಸೇರಿ ಒಟ್ಟು 380 ಮತದಾರರು ಮನೆಯಿಂದಲೇ ಮತದಾನ ಮಾಡುತ್ತಿದ್ದಾರೆ ಎಂದರು.

ಬೆಳಿಗ್ಗೆ 7 ಗಂಟೆಗೆ ಮನೆಯಿಂದ ಮತದಾನ ಮಾಡುವ ಕಾರ್ಯ ಆರಂಭವಾಗಿದ್ದು, 4 ಅಧಿಕಾರಿಗಳ ತಂಡ 4 ರೂಟ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿದೆ. ಪ್ರತಿ ತಂಡ 35 ಮತದಾರರಿಂದ ಮನೆಯಿಂದಲೇ ಮತದಾನ ಮಾಡಿಸುವ ಕಾರ್ಯದಲ್ಲಿ ತೊಡಗಿದ್ದಾರೆ. ಚುನಾವಣಾ ಆಯೋಗದ ಈ ಕಾರ್ಯದಿಂದ ಮತಗಟ್ಟೆಗಳಿಗೆ ಬಂದು ಮತದಾನ ಮಾಡಲು ಸಾಧ್ಯವಾಗದವರು ಖುಷಿ ವ್ಯಕ್ತಪಡಿಸುತ್ತಾ ಮತದಾನ ಮಾಡುತ್ತಿದ್ದಾರೆ ಎಂದರು.

ತುಮಕೂರು ನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಒಟ್ಟು 235 ಮತಗಟ್ಟೆಗಳಿದ್ದು, 36 ಮತಗಟ್ಟೆಗಳನ್ನು ಕ್ರಿಟಿಕಲ್ ಎಂದು ಗುರುತಿಸಲಾಗಿದೆ. ವಿಶೇಷವಾಗಿ 5 ಮಹಿಳಾ ಮತಗಟ್ಟೆಗಳು, 1 ವಿಕಲಚೇತನ ಮತಗಟ್ಟೆಗಳು, 1 ಧ್ಯೇಯ ಆಧಾರಿತ ಮತಗಟ್ಟೆಗಳು, 1 ಯುವ ಅಧಿಕಾರಿಗಳ ಮತಗಟ್ಟೆ ಹಾಗೂ 1 ಸಾಂಪ್ರದಾಯಿಕ ಆಧಾರಿತ ಮತಗಟ್ಟೆ ಸ್ಥಾಪಿಸಲಾಗಿದೆ ಎಂದು ಅವರು ತಿಳಿಸಿದರು.

# ಬಲೂಚಿಸ್ತಾನ್‌ದಲ್ಲಿ ಉಗ್ರರಿಂದ 11 ಜನರ ಹತ್ಯೆ

ಕರಾಚಿ,ಏ. : ಪಾಕಿಸ್ತಾನದ ಪ್ರಕ್ಷುಬ್ಧ ಬಲೂಚಿಸ್ತಾನ್ ಪ್ರಾಂತ್ಯದಲ್ಲಿ ಅಪರಿಚಿತ ಉಗ್ರಗಾಮಿಗಳು ಒಂಬತ್ತು ಬಸ್ ಪ್ರಯಾಣಿಕರು ಸೇರಿದಂತೆ ಕನಿಷ್ಠ 11 ಜನರನ್ನು ಕೊಂದಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಮೊದಲ ಘಟನೆಯಲ್ಲಿ, ಶಸಸಜ್ಜಿತ ವ್ಯಕ್ತಿಗಳು ನೋಶ್ಕಿ ಜಿಲ್ಲೆಯ ಹೆದ್ದಾರಿಯಲ್ಲಿ ಬಸ್ಸನ್ನು ನಿಲ್ಲಿಸಿದರು ಮತ್ತು ಬಂದೂಕು ತೋರಿಸಿ ಒಂಬತ್ತು ಜನರನ್ನು ಅಪಹರಿಸಿದರು ಎಂದು ಪೊಲೀಸರು ತಿಳಿಸಿದ್ದಾರೆ. ಈ ಒಂಬತ್ತು ಜನರ ದೇಹಗಳು ನಂತರ ಸೇತುವೆಯ ಸಮೀಪವಿರುವ ಪರ್ವತ ಪ್ರದೇಶಗಳಲ್ಲಿ ಗುಂಡಿನ ಗಾಯಗಳೊಂದಿಗೆ ಪತ್ತೆಯಾಗಿವೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಬಸ್ ಕ್ವೆಟ್ಟಾದಿಂದ ತಫ್ತಾ???ಗೆ ಹೋಗುತ್ತಿದ್ದಾಗ ಶಸಸಜ್ಜಿತ ಜನರು ಅದನ್ನು ನಿಲ್ಲಿಸಿದರು ಮತ್ತು ಪ್ರಯಾಣಿಕರನ್ನು ಗುರುತಿಸಿದ ನಂತರ ಒಂಬತ್ತು ಜನರನ್ನು ಪರ್ವತ ಪ್ರದೇಶಗಳಿಗೆ ಕರೆದೊಯ್ದರು ಎಂದು ಅವರು ಹೇಳಿದರು.

ಪ್ರತ್ಯೇಕ ಘಟನೆಯಲ್ಲಿ ಅದೇ ಹೆದ್ದಾರಿಯಲ್ಲಿ ಕಾರಿನ ಮೇಲೆ ಗುಂಡು ಹಾರಿಸಲಾಗಿದ್ದು, ಇಬ್ಬರು ಪ್ರಯಾಣಿಕರು ಸಾವನ್ನಪ್ಪಿದ್ದಾರೆ ಮತ್ತು ಇಬ್ಬರು ಗಾಯಗೊಂಡಿದ್ದಾರೆ.ನೋಶ್ಕಿ ಹೆದ್ದಾರಿಯಲ್ಲಿ 11 ಜನರ ಹತ್ಯೆಯಲ್ಲಿ ಭಾಗಿಯಾಗಿರುವ ಭಯೋತ್ಪಾದಕರನ್ನು ಕ್ಷಮಿಸುವುದಿಲ್ಲ ಮತ್ತು ಶೀಘ್ರದಲ್ಲೇ ಬೇಟೆಯಾಡುವುದಾಗಿ ಬಲೂಚಿಸ್ತಾನದ ಮುಖ್ಯಮಂತ್ರಿ ಮಿರ್ ಸರ್ಫರಾಜ್ ಬುಗ್ತಿ ಹೇಳಿದ್ದಾರೆ.

# ಜಾತ್ರೆ ಖುಷಿ ಹೆಚ್ಚಿಸಿದ ಮಳೆ; ಕುಣಿದು ಸಂಭ್ರಮಿಸಿದ ಜನ

ಮಡಿಕೇರಿ : ಶುಕ್ರವಾರ ರಾಜ್ಯದ ಹಲವು ಜಿಲ್ಲೆಗಳಲ್ಲಿ ಉತ್ತಮ ಮಳೆಯಾಗಿದೆ. ಕೊಡಗು ಜಿಲ್ಲೆಯಲ್ಲಿ ಕೂಡ ಉತ್ತಮ ಮಳೆಯಾಗುತ್ತಿದ್ದು, ಶುಕ್ರವಾರ ಜನ ಮಳೆಯಲ್ಲಿ ಕುಣಿದು ಸಂಭ್ರಮಿಸಿದ್ದಾರೆ. ಮಾರಿಯಮ್ಮ ಮತ್ತು ಕೊರಗಜ್ಜ ದೇವರ ವಾರ್ಷಿಕ ಉತ್ಸವ ಮಾಡುವ ಸಂದರ್ಭದಲ್ಲಿ ಮಳೆ ಶುರುವಾಗಿದ್ದು, ಜನರ ಸಂಭ್ರಮಕ್ಕೆ ಪಾರವೇ ಇಲ್ಲದಂತಾಗಿತ್ತು. ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಅಲ್ಲದೇ ಇದ್ದರೂ, ಹಲವು ಜಿಲ್ಲೆಗಳಿಗೆ ವರುಣನ ಕೃಪೆ ಸಿಕ್ಕಿದೆ. ಭಾರಿ ಬಿಸಿಲಿನಿಂದ ಕಂಗಾಲಾಗಿದ್ದ ಜನಕ್ಕೆ ಯುಗಾದಿ ಹಬ್ಬದ ದಿನದಿಂದ ಸುರಿಯುತ್ತಿರುವ ಮಳೆ ನೆಮ್ಮದಿ ಮೂಡಿಸಿದೆ.

ಉತ್ಸವದಲ್ಲಿ ಪಾಲ್ಗೊಂಡ ಜನ ಮಳೆ ಬಂದರೂ ಅಲ್ಲಿಂದ ಕದಲಿಲ್ಲ ಬದಲಾಗಿ ವಾಲಗದ ಸ್ವರಕ್ಕೆ ಹೆಜ್ಜೆ ಹಾಕುವ ಮೂಲಕ ಖುಷಿಪಟ್ಟರು. ಕಾವೇರಿ ನದಿಯ ತವರು ಜಿಲ್ಲೆಯಲ್ಲಿ ಉತ್ತಮ ಮಳೆಯಾಗುತ್ತಿರುವುದು ಸದ್ಯ ತಾತ್ಕಾಲಿಕವಾಗಿ ನೆಮ್ಮದಿ ತರಿಸಿದೆ.

ಈ ಬಾರಿ ರಾಜ್ಯಕ್ಕೆ ಭಾರಿ ಮಳೆ ಬೇಕಾಗಿದೆ. ಭೀಕರ ಬರದ ಪರಿಣಾಮ ಕೆರೆ, ನದಿ, ಹೊಳೆಗಳು ಬತ್ತಿ ಹೋಗಿವೆ, ಜಲಾಶಯಗಳಲ್ಲಿ ಕೂಡ ನೀರಿನ ಪ್ರಮಾಣ ದಾಖಲೆ ಮಟ್ಟದಲ್ಲಿ ಕಡಿಮೆಯಾಗಿದೆ. ಕುಡಿಯುವ ನೀರಿಗೂ ಸಮಸ್ಯೆ ಉಂಟಾಗಿದೆ. ಮುಂಗಾರು ಆಗಮನಕ್ಕೆ ಇನ್ನೂ ಎರಡು ತಿಂಗಳು ಇದ್ದರೂ, ಯುಗಾದಿ ವೇಳೆಯಲ್ಲೇ ಬೇಸಿಗೆ ಮಳೆ ಆರಂಭವಾಗಿದೆ. ಉತ್ತರ ಒಳನಾಡಿನ ಹಲವು ಭಾಗಗಳಲ್ಲಿ ಗುಡುಗು, ಮಿಂಚು ಸಹಿತ ಭಾರಿ ಮಳೆಯಾಗಿದೆ.

ಕೊಡಗಿನಲ್ಲಿ ಮಳೆ ರಾಜ್ಯದಲ್ಲಿ ವರ್ಷದ ಮೊದಲ ಮಳೆ ಶುರುವಾಗಿದ್ದೇ ಕೊಡಗು ಜಿಲ್ಲೆಯಲ್ಲಿ. ಏಪ್ರಿಲ್ ಆರಂಭದಿಂದಲೂ ಕೊಡಗು ಜಿಲ್ಲೆಯಲ್ಲಿ ಆಗಾಗ್ಗೆ ಮಳೆರಾಯ ದರ್ಶನ ಕೊಡುತ್ತಿದ್ದಾನೆ. ಶುಕ್ರವಾರ ಕೊಡಗು ಜಿಲ್ಲೆಯ ಹಲವು ಭಾಗಗಳಲ್ಲಿ ಉತ್ತಮ ಮಳೆಯಾಗಿದೆ. ಜಿಲ್ಲೆಯ ನೆಲ್ಯಹುದಿಕೇರಿ, ಮೂರ್ನಾಡು ಸಮೀಪದ ಹೊದ್ದೂರು ವಾಟೆಕಾಡು, ನಾಪೋಕ್ಲು, ಕೊಳಕೇರಿಯಲ್ಲಿ ವ್ಯಾಪಕ ಮಳೆಯಾಗಿದೆ.

ಕುಂಬಳದಾಳು, ಮೇಕೇರಿ, ಮಡಿಕೇರಿ ತಾಲೂಕು ಅರ್ವತೋಕ್ಲು, ಬಿಳಿಗೇರಿ, ಕಗ್ಗೊಡ್ಲು, ಬಲ್ಲಮಾವಟಿ, ನೆಲಜಿ, ಕುಂಜಿಲ, ವಿರಾಜಪೇಟೆ ತಾಲೂಕಿನ ನಾಂಗಲ ಸೇರಿದಂತೆ ಹಲವು ಕಡೆ ಭರ್ಜರಿ ಮಳೆಯಾಗಿದೆ. ತನ್ನ ತಂಗಿ ಪನ್ನಂಗಾಲ್ತಮ್ಮೆಯ ಉತ್ಸವದ ದಿನವೇ ಮಾಗುರು ಇಗ್ಗುತ್ತಪ್ಪ ಮಳೆ ತರುತ್ತಾರೆ ಎನ್ನುವ ಕೊಡಗು ಜನತೆಯ ನಂಬಿಕೆಯಂತೆ ಶುಕ್ರವಾರ ಮಳೆಯಾಗಿದೆ.

# ಮುಕ್ಕಾದ ದೇವರ ಪೋಟೋಗಳನ್ನು ವಿಸರ್ಜನೆ ಮಾಡಿ



ಬೆಳಗಾವಿ: ಪ್ರಧಾನ ನರೇಂದ್ರ ಮೋದಿ ಅವರ ಸ್ವಚ್ಛ ಭಾರತದ ಕಲ್ಪನೆಯಂತೆ ಬೆಳಗಾವಿ ಸರ್ವಲೋಕಾ ಸೇವಾ ಫೌಂಡೇಶನ್ ಸಂಸ್ಥಾಪಕ, ಅಧ್ಯಕ್ಷ ವೀರೇಶ ಬಸಯ್ಯ ಹಿರೇಮಠ ನೇತೃತ್ವದಲ್ಲಿ ಮುಕ್ಕಾದ ದೇವರ ಫೋಟೋಗಳನ್ನು ಗಿಡ, ಮರಗಳ ಕೆಳಗಡೆ ಇಡುವ ಬದಲು ಶಾಸ್ತ್ರೋಕ್ತವಾಗಿ ಅದನ್ನು ವಿಸರ್ಜನೆ ಮಾಡಬೇಕೆಂದು ಜನರಲ್ಲಿ ಜಾಗೃತಿ ಮೂಡಿಸಿ ನಗರದ ಪ್ರಮುಖ ಸ್ಥಳಗಳಲ್ಲಿ ಬಿತ್ತಿ ಪತ್ರ ಹಚ್ಚುವ ಮೂಲಕ ಮಾದರಿಯಾಗಿದ್ದಾರೆ.

ದೇವರ ಫೋಟೋಗಳನ್ನು ಖುಷಿಯಿಂದ ತಂದು ಮನೆಯಲ್ಲಿ ಪೂಜೆ ಮಾಡುವುದು ಸರ್ವೇಸಾಮಾನ್ಯ. ಆದರೆ ಅದೇ ಫೋಟೋ ಮುಕ್ಕಾದಾಗ ಅದನ್ನು ಮರ, ಗಿಡದ ಕೆಳಗಡೆ ಅನಾಥವಾಗಿ ಇಡುವುದು ಸರಿಯಲ್ಲ. ಪ್ರತಿಯೊಬ್ಬರೂ ತಮ್ಮ ಕರ್ತವ್ಯ ಮೆರೆಯಬೇಕು. ಸ್ವತಃ ತಾವೇ ಮುಕ್ಕಾದ ಫೋಟೋಗಳನ್ನು ವಿಧಿ ವಿಧಾನಗಳ ಮೂಲಕ ವಿಸರ್ಜನೆ ಮಾಡುವುದು ಉತ್ತಮ ಎಂದು ವೀರೇಶ ಬಸಯ್ಯ ಹಿರೇಮಠ ಜನರಿಗೆ ಕರೆ ನೀಡಿದರು. ಪ್ರಧಾನ ನರೇಂದ್ರ ಮೋದಿ ಅವರು ಸ್ವಚ್ಛ ಭಾರತದ ಕಲ್ಪನೆಯನ್ನು ಮೊದಲಿಗೆ ಕೆಲವರು ಆಡಿಕೊಂಡಿದ್ದರು. ಈಗ ದೇಶವೇ ಬದಲಾಗಿದೆ. ಪ್ರತಿಯೊಬ್ಬರೂ ಸ್ವಚ್ಛತೆಗೆ ಅಧ್ಯತೆ ನೀಡುತ್ತಿದ್ದಾರೆ. ಅದರಂತೆ ನಾವು ಆರಂಭಿಸಿರುವ ಫೋಟೋ ವಿಸರ್ಜನೆಯ ಕಾರ್ಯವನ್ನು ಪ್ರತಿಯೊಬ್ಬರು ಚಾಚು ತಪ್ಪದೆ ಮಾಡಿದರೇ ದೇವರ ಪ್ರೀತಿಗೆ ಪಾತ್ರರಾಗುತ್ತಾರೆ ಎಂದರು.

ಫೋಟೋ ವಿಸರ್ಜನೆ ಮಾಡುವಾಗ ಜನರು ಫೋಟೋದಲ್ಲಿರುವ ಗಾಜು ಮತ್ತು ಕಟ್ಟಿಗೆಯನ್ನು ಬೇರ್ಪಡಿಸಬೇಕು. ಗಾಜುಗಳನ್ನು ಮರುಬಳಿಕೆಗೆ ಪ್ರಯತ್ನಿಸಿ, ಕಟ್ಟಿಗೆಯನ್ನು ಅಗ್ನಿ ಸ್ಪರ್ಶದಲ್ಲಿ ಹಾಕಬೇಕು. ದೇವರ ಫೋಟೋಗಳನ್ನು ನಿತ್ಯ ಪೂಜಿಸುವ ಹಾಗೆ ಅಗ್ನಿ ಯಜ್ಞ ಮಾಡಬೇಕು. ಕೊನೆಗೆ ಉಂಟಾಗುವ ಬಸ್ಮವನ್ನು ತುಳಸಿ, ಆಲ, ಬಿಲ್ವ ಪತ್ರೆ, ಬನ್ನಿ ಯಾವುದಾದರೂ ಗಿಡದ ಕೆಳಗಡೆ ಹಾಕುವುದು ಉತ್ತಮ ಎಂದರು.

ನೀಲಕಂಠಯ್ಯ ರಾಚಯ್ಯ ಹಿರೇಮಠ ಶಾಸ್ತ್ರೀ, ಪಾಲಿಕೆ ಸದಸ್ಯ ಬಸವರಾಜ ಮೊದಗೇಕರ, ಪರಶುರಾಮ, ಸುನೀಲ್ ಮಾಯನಾಚೆ, ಶೀತಲ ಪಾಟೀಲ್, ಮಾರುತಿ ಕಣಬರಕರ, ಮತ್ತು ಕುಡುಚಿ ಕಲ್ಮೇಶ್ವರ ದೇವಸ್ಥಾನದ ಆಡಳಿ ಸಿಬ್ಬಂದಿಗಳು ಹಾಗೂ ಭಕ್ತರು ಉಪಸ್ಥಿತರಿದ್ದರು.